ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಮೀಸಲಿರಿಸಿದ ಅನುದಾನದ ದುರ್ಬಳಕೆಯ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) –

107 (1035) ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 3 ವರ್ಷಗಳಿಂದ ಸರ್ಕಾರದ ವಿವಿಧ ಇಲಾಖೆಗಳಿಂದ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಅಭಿವೃದ್ಧಿಗಾಗಿ ರಸ್ತೆಗಳನ್ನು ನಿರ್ಮಿಸಲಾಗುತ್ತಿದ್ದು, ಈ ಸಮುದಾಯದ ಜನವಾಸಿಸದಿರುವ ಪ್ರದೇಶದಲ್ಲಿ ಕಾಮಗಾರಿ ನಿರ್ಮಿಸಿರುವ ಕುರಿತು ಸಾರ್ವಜನಿಕರಿಂದ ಸ್ವೀಕೃತವಾದ ದೂರುಗಳ ಸಂಖ್ಯೆ ಎಷ್ಟು; ಅವುಗಳು ಯಾವುವು;(ಜಿಲ್ಲಾವಾರು, ಇಲಾಖಾವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೆ.ಆರ್.ಡಿ.ಎಲ್. ಮೂಲಕ ನಿರ್ವಹಿಸಲಾಗುತ್ತಿರುವ ವಿವಿಧ ಇಲಾಖೆಗಳ ಕಾಮಗಾರಿಯನ್ನು ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯದ ಜನ ವಾಸಿಸದಿರುವ ಪ್ರದೇಶದಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಕುರಿತು ಇಲಾಖೆಯ ಕ್ರಮವೇನು;

(ಇ) ಉಡುಪಿ ಜಿಲ್ಲೆಯಲ್ಲಿ ಕೆ.ಆರ್.ಡಿ.ಎಲ್. ಮೂಲಕ ನಿರ್ವಹಿಸಲಾಗುತ್ತಿರುವ ಪರಿಶಿಷ್ಟ ಜಾತಿ ಮೀಸಲು ಕಾಮಗಾರಿಗಳಾದ ಅಂಪಾರು ಗ್ರಾಮದಿಂದ ಕಲ್ಲು ಹೊಳೆ ಮೂಲಕ ಶಂಕರನಾರಾಯಣ ಗ್ರಾಮದ ಕ್ರೋಡಬೈಲೂರು ಸಂಪರ್ಕ ರಸ್ತೆ ಶಂಕರನಾರಾಯಣ ಅಂಪಾರು ಮುಖ್ಯ ರಸ್ತೆ ತಾರೆ ಮಾರನಜೆಡ್ಡುನಿಂದ ಕುಡಿಬೈಲು ಸಂಪರ್ಕ ರಸ್ತೆ, ಶಂಕರನಾರಾಯಣ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೆರವಳ್ಳಿ ಕ್ರಾಸ್‌ನಿಂದ ಕುಪ್ಪಾರು ಮಹಾಬಲರವರ ಮನೆಗೆ ಹೋಗುವ ರಸ್ತೆ ಕಾಮಗಾರಿಗಳಲ್ಲಿ ಪರಿಶಿಷ್ಟ ಜಾತಿ ಕಾಲೋನಿ ಮತ್ತು ಪರಿಶಿಷ್ಟ ಜಾತಿ ಸಮುದಾಯದ ಜನರು ವಾಸಿಸದಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಈ ಕಾಮಗಾರಿಯು ಯಾರಿಂದ ಶಿಫಾರಸ್ಸು ಗೊಂಡಿರುತ್ತದೆ; ಈ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಕೆ.ಆರ್.ಡಿ.ಎಲ್. ಮೇಲೆ ಇಲಾಖೆಯ ಕ್ರಮವೇನು?